# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1091
ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 25.07.2024
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು.

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | 2014 ರಲ್ಲಿಯೇ ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು 524 ಅಡಿಗೆ ಎತ್ತರಿಸಲು ಅಂತಿಮ ಆದೇಶವಾಗಿರುವುದು ನಿಜವೇ; | ಲಾಲ್ ಬಹದ್ದೂರ್ ಶಾಸ್ತ್ರೀ ಜಲಾಶಯವನ್ನು 524.256 ಮೀ. ವರೆಗೆ ಎತ್ತರಿಸುವುದಕ್ಕೆ ಕೃಷ್ಣಾ ನ್ಯಾಯಾಧೀಕರಣ ತೀರ್ಪು-2ರ ಮಧ್ಯಂತರ ವರದಿ 2010ರ ಅನ್ವಯ ಅನುಮತಿ ನೀಡಲಾಗಿದೆ. |
| ಆ) | ಆದೇಶವಾಗಿದ್ದರೂ ಅಧಿಸೂಚನೆ ಹೊರಡಿಸದೇ ಇಲ್ಲಿಯವರೆಗೂ 519 ಅಡಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ವರದಿಅನ್ವಯ ರಾಜ್ಯಕ್ಕೆ ಹಂಚಿಕೆಯಾದ 173 ಟಿ.ಎಂ.ಸಿ. ನೀರಿನ ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆ ಅನುಷ್ಠಾನಕ್ಕಾಗಿ 130 ಟಿ.ಎಂ.ಸಿ. ಹಂಚಿಕೆಯಾಗಿರುತ್ತದೆ.<br><br>ಸದರಿ ನೀರಿನ ಬಳಕೆಗೆ ಆಲಮಟ್ಟಿ ಜಲಾಶಯದಡಿ ನೀರಿನ ಸಂಗ್ರಹಣೆ ಮಟ್ಟವನ್ನು ಆರ್.ಎಲ್.519.60 ಮೀ. ನಿಂದ ಆರ್.ಎಲ್. 524.256 ಮೀ.ರವರೆಗೆ (4.656 ಮೀ) ಎತ್ತರಿಸುವುದು ಒಳಗೊಂಡಿರುತ್ತದೆ. ಆಲಮಟ್ಟಿ ಜಲಾಶಯದ ಸಂಗ್ರಹಣೆ ಮಟ್ಟ ಆರ್.ಎಲ್. 524.256 ಮೀ.ರವರೆಗೆ ಎತ್ತರಿಸುವ ಕಾಮಗಾರಿಯು ಕೇಂದ್ರ ಸರ್ಕಾರದಿಂದ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ಗೆಜೆಟ್ ಹೊರಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.<br><br>ಮಾನ್ಯ ಸರ್ವೋಚ್ಛ ನ್ಯಾಯಾಲಯವು ಕೃಷ್ಣಾ ನ್ಯಾಯಾಧಿಕರಣ-2ರ ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಅಧಿಸೂಚನೆ ಹೊರಡಿಸದಂತೆ ತಡೆಯಾಜ್ಞೆ ನೀಡಿರುತ್ತದೆ. ಆದುದರಿಂದ, ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪು ಇನ್ನೂ ಕೇಂದ್ರ ಸರ್ಕಾರದಿಂದ ಅಧಿಸೂಚನೆಗೊಂಡಿರುವುದಿಲ್ಲ. ಅಲ್ಲದೇ, ಕರ್ನಾಟಕ, ತೆಂಲಗಾಣ ಮತ್ತು ಆಂಧ್ರ ರಾಜ್ಯಗಳು ಸರ್ವೋಚ್ಛ ನ್ಯಾಯಾಲಯದಲ್ಲಿ ನ್ಯಾಯಾಧೀಕರಣದ ಆದೇಶದ ಬಗ್ಗೆ ಸಲ್ಲಿಸಿರುವ ವಿಶೇಷ ಅನುಮತಿ ಅರ್ಜಿಗಳು ಇತ್ಯರ್ಥವಾಗಬೇಕಾಗಿರುತ್ತದೆ.<br><br>ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಸಾಧಿಸಿ, ಗೆಜೆಟ್ ಅಧಿಸೂಚನೆ ಹೊರಡಿಸಲು ಕ್ರಮ ಕೈಗೊಂಡು, ಕಾಮಗಾರಿಯ ಶೀಘ್ರ ಅನುಷ್ಠಾನಕ್ಕೆ ಕ್ರಮ ಜರುಗಿಸಲಾಗುವುದು. |
| ಇ) | ಟ್ರಿಬ್ಯೂನಲ್ ನಲ್ಲಿ 524 ಅಡಿ ಎತ್ತರಿಸಲು ಆದೇಶವಾಗಿದ್ದರೂ, ವಿಳಂಬವಾಗಲು ಕಾರಣಗಳೇನು; | |
| ಈ) | ಯಾವ ಕಾಲಮಿತಿಯೊಳಗಾಗಿ ಅನುದಾನವನ್ನು ಒದಗಿಸಿ, ಅಣೆಕಟ್ಟಿನ ಎತ್ತರವನ್ನು 524 ಅಡಿಗೆ ಹೆಚ್ಚಿಸುವ ಕಾಮಗಾರಿ ಪ್ರಾರಂಭಿಸಲಾಗುವುದು? | |

ಸಂಖ್ಯೆ:ಜಸಂಇ 67 ಡಬ್ಲ್ಯೂಬಿಎಂ 2024

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿಗಳು